# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | 139 (1H) |
| **ಮಾನ್ಯ ಸದಸ್ಯರ ಹೆಸರು** | ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| **ಉತ್ತರಿಸುವ ಸಚಿವರು** | ಉನ್ನತ ಶಿಕ್ಷಣ ಸಚಿವರು |
| **ಉತ್ತರಿಸಬೇಕಾದ ದಿನಾಂಕ** | 17.08.2026 |

| | ಪ್ರಶ್ನೆ | ಉತ್ತರ |
|---|---|---|
| ಅ) | ಗುಲ್ಬರ್ಗಾ ವಿಶ್ವವಿದ್ಯಾಲಯದಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳೆಷ್ಟು, ಖಾಲಿ ಇರುವ ಬೋಧಕ ಹುದ್ದೆಗಳನ್ನು ನೇಮಕಾತಿ ಮಾಡುವಂತೆ ವಿಶ್ವವಿದ್ಯಾಲಯದಿಂದ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆಯೇ; (ಮಾಹಿತಿ ಒದಗಿಸುವುದು) | ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ ಒಟ್ಟು 171 ಬೋಧಕ ಹುದ್ದೆಗಳು ಖಾಲಿ ಇರುತ್ತವೆ.<br><br>ಗುಲಬರ್ಗಾ ವಿಶ್ವವಿದ್ಯಾಲಯವು ಖಾಲಿ ಇರುವ ಬೋಧಕ ಹುದ್ದೆಗಳ ನೇಮಕಾತಿ ಮಾಡುವ ಕುರಿತಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ.<br><br>2026-27ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-121ರಲ್ಲಿ ಈ ಕೆಳಕಂಡಂತೆ ಘೋಷಿಸಲಾಗಿರುತ್ತದೆ.<br><br>"ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ 1000 ಬೋಧಕ ಹುದ್ದೆಗಳನ್ನು ತರ್ಕಬದ್ಧಗೊಳಿಸಿ ಹಂತಹಂತವಾಗಿ ಭರ್ತಿ ಮಾಡಲಾಗುವುದು".<br><br>ಈ ಆಯವ್ಯಯ ಭಾಷಣ ಕಂಡಿಕೆಯನ್ವಯ ವಿಶ್ವವಿದ್ಯಾಲಯಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲು ಕಾರ್ಯಭಾರದ ಮಾಹಿತಿಯೊಂದಿಗೆ ಅವಶ್ಯಕವಾಗಿ ಭರ್ತಿ ಮಾಡಬೇಕಾಗಿರುವ ಖಾಲಿ ಹುದ್ದೆಗಳನ್ನು ಗುರುತಿಸಿ ಪ್ರಸ್ತಾವನೆ ಸಲ್ಲಿಸುವಂತೆ ರಾಜ್ಯದ 32 ಸಾರ್ವಜನಿಕ ವಿಶ್ವವಿದ್ಯಾಲಯಗಳ ಕುಲಸಚಿವರುಗಳಿಗೆ ನಿರ್ದೇಶನ ನೀಡಲಾಗಿರುತ್ತದೆ.<br><br>ಅದರಂತೆ, ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಅ್ಯಕವಾಗಿ ಬೇಕಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದ<br><br>ಗುಲಬರ್ಗಾ ವಿಶ್ವವಿದ್ಯಾಲಯದ ಪ್ರಸ್ತಾವನೆಯನ್ನು ಒಳಗೊಂಡಂತೆ ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಅ್ಯಕವಾಗಿ ಬೇಕಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಕುರಿತು ಸ್ವೀಕೃತವಾಗಿರುವ ಪ್ರಸ್ತಾವನೆಗಳನ್ನು ಪ್ರಸ್ತುತ ಪರಿಶೀಲಿಸಲಾಗುತ್ತಿದೆ. ಸದರಿ ಪ್ರಸ್ತಾವನೆಗೆ ಸಂಬಂಧಿಸಿದಂತೆ ಅಂತಿಮ ನಿರ್ಣಯ ಕೈಗೊಂಡ ನಂತರ ಹುದ್ದೆಗಳನ್ನು ಭರ್ತಿಮಾಡಿಕೊಳ್ಳಲು ವಿಶ್ವವಿದ್ಯಾಲಯಗಳಿಗೆ ನಿರ್ದೇಶನ ನೀಡಲಾಗುತ್ತದೆ. |
| ಆ) | ಸಲ್ಲಿಸಿದಲ್ಲಿ ನೇಮಕಾತಿ ಮಾಡಲು ಸರ್ಕಾರಕ್ಕೆ ಇರುವ ಅಡೆ-ತಡೆಗಳೇನು; | |
| ಇ) | ಹುದ್ದೆ ಮಂಜೂರಾದರೂ ನೇಮಕಾತಿ ಮಾಡದಿರಲು ಕಾರಣವೇನು? | |

**ಸಂಖ್ಯೆ**: ಇಡಿ 160 ಯುಜಿವಿ 2026

**(ಬಸವರಾಜ ರಾಯರೆಡ್ಡಿ)**
ಉನ್ನತ ಶಿಕ್ಷಣ ಸಚಿವರು